# "ಒಣ ಮೆಣಸಿನಕಾಯಿ ಕಣಜ" ಬ್ಯಾಡಗಿ ಎಪಿಎಂಸಿಯಲ್ಲಿ ಏಕೀಕೃತ ಮಾರುಕಟ್ಟೆ ವೇದಿಕೆ

ಆರ್. ಮನೋಜ್
ಬೆಂಗಳೂರು.

ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆ ಮುಂಬೈ ಸರ್ಕಾರದ ಕಂದಾಯ ಇಲಾಖೆಯ ಅಧಿಸೂಚನೆ ಅನ್ವಯ 1948ರಲ್ಲಿ ಸ್ಥಾಪನೆಯಾಗಿದೆ. ಕಾಲ ಕ್ರಮೇಣ ಕರ್ನಾಟಕ ರಾಜ್ಯ ಏಕೀಕರಣಗೊಂಡ ಬಳಿಕ ಕರ್ನಾಟಕ ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ ನಿಯಂತ್ರಣ ಮತ್ತು ಅಭಿವೃದ್ಧಿ ಶಾಸನ 1966 ಮತ್ತು ನಿಯಮಗಳು 1968ರ ಕಾಯ್ದೆ ಅಡಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ರಾಜ್ಯದಲ್ಲಿ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತಿವೆ.

ಹಾವೇರಿ ಜಿಲ್ಲೆಯ ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಪ್ರಮುಖವಾಗಿ ವಹಿವಾಟು ನಡೆಯುವ ಉತ್ಪನ್ನ ಒಣಮೆಣಸಿನಕಾಯಿ. ದಕ್ಷಿಣ ಭಾರತದಲ್ಲಿ ಒಣಮೆಣಸಿನ ಕಾಯಿ ಆವಕವಾಗುವ ಮಾರುಕಟ್ಟೆಗಳ ಪೈಕಿ ಕರ್ನಾಟಕದ ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆ ಅಗ್ರಸ್ಥಾನವನ್ನು ಪಡೆದುಕೊಂಡಿದೆ. 6 ದಶಕಕ್ಕೂ ಹೆಚ್ಚು ಅವಧಿಯಿಂದ ಬ್ಯಾಡಗಿ ಮಾರುಕಟ್ಟೆಯಲ್ಲಿ ವ್ಯಾಪಾರ ವಹಿವಾಟು ನಡೆಯುತ್ತಿದೆ. ಈ ಮಾರುಕಟ್ಟೆಗೆ ನೆರೆ ರಾಜ್ಯಗಳಾದ ಆಂಧ್ರಪ್ರದೇಶ, ತಮಿಳುನಾಡು, ಮಹಾರಾಷ್ಟ್ರದ ರೈತರು ಭಾಗೀದಾರರಾಗಿದ್ದಾರೆ. ಬ್ಯಾಡಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯನ್ನು ಒಣಮೆಣಸಿನಕಾಯಿ ಕಣಜ ಎಂದು ಕರೆಯುವುದು ವಾಡಿಕೆಯಾಗಿದೆ. ಈ ಮಾರುಕಟ್ಟೆಯಲ್ಲಿ ಆವಕವಾಗುವ ಮೆಣಸಿನ ಕಾಯಿ ಉತ್ಪನ್ನಕ್ಕೆ ದೇಶ, ವಿದೇಶಗಳಿಂದ ಅತೀ ಹೆಚ್ಚಿನ ಬೇಡಿಕೆ ಇದೆ. ಇಲ್ಲಿಂದಲೇ ಈ ಉತ್ಪನ್ನವನ್ನು ರಫ್ತು ಮಾಡಲಾಗುತ್ತಿದೆ.

ಇಂತಹ ಪ್ರಖ್ಯಾತಿ ಹೊಂದಿದ ಮಾರುಕಟ್ಟೆಯಲ್ಲಿ ಒಣಮೆಣಸಿನಕಾಯಿ ವ್ಯಾಪಾರ ವಹಿವಾಟು ಈ ಹಿಂದೆ ಮ್ಯಾನುಯಲ್ ಟೆಂಡರ್ (ಸಿಬ್ಬಂದಿ ಅವಲಂಬಿತ) ಪದ್ಧತಿಯಲ್ಲಿ ನಡೆಸಲಾಗುತ್ತಿತ್ತು. ಪ್ರತಿ ಸೋಮವಾರ ಮತ್ತು ಗುರುವಾರ ಮಾರುಕಟ್ಟೆಗೆ ವಿವಿಧ ಭಾಗಗಳಿಂದ ರೈತರು ಒಣಮೆಣಸಿನಕಾಯಿ ಉತ್ಪನ್ನವನ್ನು ಮಾರಾಟಕ್ಕಾಗಿ ತರುತ್ತಿದ್ದರು. ಮಾರುಕಟ್ಟೆಯಲ್ಲಿ ಮ್ಯಾನುಯೆಲ್ ಟೆಂಡರ್ ಆಗುತ್ತಿದ್ದುದರಿಂದ ರೈತರು ಮತ್ತು ವರ್ತಕರು ಮಾರುಕಟ್ಟೆ ಪ್ರಾಂಗಣದಲ್ಲಿ ವಹಿವಾಟಿಗಾಗಿ ಹೆಚ್ಚು ಸಮಯ ಕಳೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು. ಉತ್ಪನ್ನಕ್ಕೆ ಕೈಯಿಂದ ದರ ನಮೂದಿಸಿ ಟೆಂಡರ್ ಡಬ್ಬಿಗಳಲ್ಲಿ ಖರೀದಿದಾರರು ಹಾಕುತ್ತಿದ್ದರು. ಮಾರುಕಟ್ಟೆ ಅಧಿಕಾರಿಗಳು ಲಾಟ್ ನಂಬರ್ ವಾರು ಟೆಂಡರ್ ಡಿಕ್ಲೆರೇಷನ್ ಸ್ಲಿಪ್ ರೈತರಿಗೆ ನೀಡಲು ಹರಸಾಹಸ ಪಡುವಂತಹ ವ್ಯವಸ್ಥೆಯನ್ನು ತಾವು ಕಂಡಿರಬಹುದು. ದರಪಟ್ಟಿ ಪೂರೈಸಿದ ನಂತರ ರೈತರ ಉತ್ಪನ್ನಗಳನ್ನು ತೂಕ ಮಾಡಿ, ರೈತರಿಗೆ ಲೆಕ್ಕತೀರುವಳಿ ಪಟ್ಟಿಯನ್ನು ಸಿದ್ಧಪಡಿಸಿ ರೈತರಿಗೆ ಹಣ ಪಾವತಿ ಮಾಡುವುದು ವರ್ತಕರು ಖರೀದಿಸಿದ ಉತ್ಪನ್ನವನ್ನು ವರ್ತಕರಿಗೆ ವಿತರಿಸುವುದು ಮತ್ತು ಅವರ ಉತ್ಪನ್ನ ಸಾಗಾಟ ಮಾಡಲು ಪರ್ಮಿಟ್ ನೀಡುವುದು, ಇಡೀ ಹಗಲು ರಾತ್ರಿಯ ಕಾರ್ಯ ಚಟುವಟಿಕೆಯಾಗಿತ್ತು. ಈ ರೀತಿಯ ಒತ್ತಡದ ಕಾರ್ಯದಿಂದಾಗಿ ಮಾರುಕಟ್ಟೆ ಅಧಿಕಾರಿಗಳು ಎಷ್ಟೇ ಜಾಗೃತಿ ವಹಿಸಿದರೂ ಸರ್ವಸಾಮಾನ್ಯವಾಗಿ ಪಾರದರ್ಶಕತೆ ಮತ್ತು ದಕ್ಷತೆ ಕಾಪಾಡಲು ಸಾಧ್ಯವಾಗುತ್ತಿರಲಿಲ್ಲಾ. ಬ್ಯಾಡಗಿ ಮಾರುಕಟ್ಟೆಯಲ್ಲಿ ಈ ಹಿಂದೆ 2014ನೇ ಸಾಲಿನಲ್ಲಿ ಒಟ್ಟು 8.61 ಲಕ್ಷ ಕ್ವಿಂಟಾಲ್ ಒಣಮೆಣಸಿನಕಾಯಿ ಆವಕವಾಗಿದೆ. ಮಾರುಕಟ್ಟೆಯಲ್ಲಿ ಗರಿಷ್ಠ ವಹಿವಾಟು ನಡೆದ ದಿನ 1.23 ಲಕ್ಷ ಚೀಲದ, 14000 ಲಾಟ್‌ಗಳನ್ನು 60 ಮಂದಿ ವರ್ತಕರು ವ್ಯವಹಾರ ನಡೆಸುತ್ತಿದ್ದರು. 60,000 ಬಿಡ್‌ಗಳ ವಹಿವಾಟನ್ನು ಸುಗಮವಾಗಿ ನಡೆಸಲು ಸುಮಾರು 50 ಮಂದಿ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದರು. ಮಾರುಕಟ್ಟೆಗಳಲ್ಲಿ ಈ ರೀತಿಯ ಅನಾನುಕೂಲಗಳನ್ನು ತಪ್ಪಿಸಿ, ಮಾರುಕಟ್ಟೆಯಲ್ಲಿ ಎಲ್ಲಾ ವಹಿವಾಟುಗಳನ್ನು ಪಾರದರ್ಶಕತೆ, ದಕ್ಷತೆ ಹಾಗೂ ಸರಳತೆಯಿಂದ ನಡೆಸಲು ಏಕೀಕೃತ ಮಾರುಕಟ್ಟೆ ವೇದಿಕೆಯನ್ನು ಸ್ಥಾಪಿಸಲಾಗಿದೆ.